National
Kannada
28.11.2025: 13.10hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**1.** ಉಡುಪಿ ಶ್ರೀಕೃಷ್ಣ ಮಠದಲ್ಲಿ ಲಕ್ಷಕಂಠ ಗೀತಾ ಪಾರಾಯಣದಲ್ಲಿ ಪಾಲ್ಗೊಂಡ ಪ್ರಧಾನಿ ನರೇಂದ್ರ ಮೋದಿ; ಕನಕನ ಕಿಂಡಿಗೆ ಸುವರ್ಣ ಕವಚ ಅರ್ಪಣೆ

**2.** ಸುರಕ್ಷಿತ ಹಾಗೂ ಸಶಕ್ತ ಭಾರತದಿಂದಲೇ ವಿಕಸಿತ ಭಾರತವಾಗಲು ಸಾಧ್ಯ - ರಕ್ಷಣಾ ಸಚಿವ ರಾಜನಾಥ್ ಸಿಂಗ್

**3.** ಛತ್ತೀಸಗಢದಲ್ಲಿಂದು ೬೦ನೇ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರ ಮತ್ತು ಮಹಾನಿರೀಕ್ಷಕರ ಸಮ್ಮೇಳನ ಆರಂಭ

**4.** ಸೈಯದ್ ಮುಷ್ತಾಕ್ ಅಲಿ ಟಿ-೨೦ ಕ್ರಿಕೆಟ್ ಟೂರ್ನಿ; ಇಂದು ಕರ್ನಾಟಕ- ಜಾರ್ಖಂಡ್ ಮುಖಾಮುಖಿ

****

ಕರ್ನಾಟಕ ಮತ್ತು ಗೋವಾ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಇಂದು ಉಡುಪಿಯ ಶ್ರೀ ಕೃಷ್ಣ ಮಠಕ್ಕೆ ಭೇಟಿ ನೀಡಿ, ಶ್ರೀಕೃಷ್ಣನ ದರ್ಶನ ಪಡೆದು, ನಂತರ ಮಠದಲ್ಲಿ ಆಯೋಜಿಸಲಾಗಿರುವ ಲಕ್ಷಕಂಠ ಗೀತಾ ಪಾರಾಯಣದಲ್ಲಿ ಭಾಗವಹಿಸಿದರು. ಲಕ್ಷಕಂಠ ಗೀತಾ ಪಾರಾಯಣ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಸಾಧುಗಳ, ವಿದ್ವಂಸರು ಹಾಗೂ ಭಕ್ತರು ಸೇರಿದಂತೆ ಒಂದು ಲಕ್ಷಕ್ಕೂ ಹೆಚ್ಚು ಮಂದಿ ಭಾಗವಹಿಸಿ ಭಗವದ್ಗೀತೆಯನ್ನು ಒಟ್ಟಾಗಿ ಪಠಿಸಿದರು. ಪಠಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಪಾಲ್ಗೊಂಡರು. ಬಳಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಯುವಕರು ಭಗವದ್ಗೀತೆಯ ಗೀತೆಯ ಚೈತನ್ಯ ಮತ್ತು ಬೋಧನೆಗಳೊಂದಿಗೆ ಸಂಪರ್ಕ ಸಾಧಿಸುತ್ತಿರುವ ರೀತಿ ಸ್ಫೂರ್ತಿಧಾಯಕವಾಗಿದೆ. ಶತಮಾನಗಳಿಂದ ಭಾರತವು ವೇದ ಉಪನಿಷತ್ತು ಮತ್ತು ಧರ್ಮ ಗ್ರಂಥಗಳ ಜ್ಞಾನವನ್ನು ಮುಂದಿನ ಪೀಳಿಗೆಗೆ ತಲುಪಿಸುವ ಸಂಪ್ರದಾಯವನ್ನು ಹೊಂದಿದೆ. ಈ ಕಾರ್ಯಕ್ರಮ ಈ ಸಂಪ್ರದಾಯದ ಅರ್ಥಪೂರ್ಣ ಮುಂದುವರಿಕೆಯಾಗಿದೆ ಹೇಳಿದ್ದಾರೆ. ಲಕ್ಷಕಂಠದಿಂದ ಜಗತ್ತಿಗೆ ಸಾಮೂಹಿಕ ಚೇತನ ಸಿಗಲಿದ್ದು, ವಿಶೇಷ ಶಕ್ತಿ ಪ್ರಾಪ್ತಿಯಾಗುತ್ತದೆ. ನಮ್ಮ ದೇಶದಲ್ಲಿ ಮಂತ್ರ ಪಠಣ ಶತಮಾನಗಳಿಂದ ನಡೆಯುತ್ತಾ ಬಂದಿದೆ. ಇದು ಸನಾತನ ಧರ್ಮದ ಜಾಗತಿಕ ಆಂದೋಲನವಾಗಿದೆ ಎಂದರು.

ಇದಕ್ಕೂ ಮುನ್ನ ಅವರು, ಕೃಷ್ಣ ಗರ್ಭಗುಡಿಯ ಮುಂಭಾಗದಲ್ಲಿರುವ ಸುವರ್ಣ ತೀರ್ಥ ಮಂಟಪವನ್ನು ಉದ್ಘಾಟಿಸಿದರು. ಜೊತೆಗೆ ಪವಿತ್ರ ಕನಕನ ಕಿಂಡಿಗೆ ಕನಕ ಕವಚವನ್ನು ಅರ್ಪಿಸಿದರು. ಬೆಳಗ್ಗೆ ಮಂಗಳೂರಿಗೆ ವಿಶೇಷ ವಿಮಾನದಲ್ಲಿ ಆಗಮಿಸಿದ ಅವರು, ಆದಿ ಉಡುಪಿಗೆ ಹೆಲಿ ಪ್ಯಾಡ್ ನಿಂದ ಬಂದಿಳಿದರು. ಬಳಿಕ ಬನ್ನಂಜೆ ನಾರಾಯಣ ಗುರು ವೃತ್ತದ ಬಳಿಯಿಂದ ಕೃಷ್ಣ ಮಠದವರೆಗೆ ರೋಡ್ ಶೋ ನಡೆಸಿದರು. ಪ್ರಧಾನಿ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿ ಬಿಗಿಬಂದೋಬಸ್ತ್ ಏರ್ಪಡಿಸಲಾಗಿದೆ. ಉಡುಪಿ ಜಿಲ್ಲೆಯಲ್ಲಿ ಡ್ರೋನ್ ಹಾರಾಟ ನಿಷೇಧಿಸಲಾಗಿದೆ. ಶ್ರೀಕೃಷ್ಣ ಮಠಕ್ಕೆ ಏಳು ಗಂಟೆಗಳ ಕಾಲ ಭಕ್ತರಿಗೆ ದರ್ಶನ ನಿರ್ಬಂಧಿಸಲಾಗಿದೆ. ಉಡುಪಿ ಭೇಟಿಯ ನಂತರ ಪ್ರಧಾನಮಂತ್ರಿ, ಗೋವಾದಲ್ಲಿ ಸಂಸ್ಥಾನ ಗೋಕರ್ಣ ಪರ್ತಗಾಲಿ ಜೀವೋತ್ತಮ ಮಠದ ೫೫೦ ನೇ ವಾರ್ಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಮಠದಲ್ಲಿ ಕಂಚಿನಿಂದ ಮಾಡಲ್ಪಟ್ಟ ೭೭ ಅಡಿ ಎತ್ತರದ ರಾಮನ ಪ್ರತಿಮೆಯನ್ನು ಪ್ರಧಾನಿ ಅನಾವರಣಗೊಳಿಸಲಿದ್ದಾರೆ ಮತ್ತು ರಾಮಾಯಣ ವಿಷಯಾಧಾರಿತ ಉದ್ಯಾನವನ್ನೂ ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ವಿಶೇಷ ಅಂಚೆ ಚೀಟಿ ಮತ್ತು ಸ್ಮರಣಾರ್ಥ ನಾಣ್ಯವನ್ನು ಪ್ರಧಾನಿ ಬಿಡುಗಡೆ ಮಾಡಲಿದ್ದಾರೆ.

****

ಭಾರತ ಇಂದು ಜಾಗತಿಕ ಸಂವಾದವನ್ನು ರೂಪಿಸಿದ್ದು, ಇಂಡೋ ಪೆಸಿಫಿಕ್ ಮತ್ತು ಜಾಗತಿಕ ದಕ್ಷಿಣಾದಾದ್ಯಂತದ ರಾಷ್ಟ್ರಗಳು ಭಾರತವನ್ನು ವಿಶ್ವಾಸಾರ್ಹ ಪಾಲುದಾರನಾಗಿ ನೋಡುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಚಾಣಕ್ಯ ರಕ್ಷಣಾ ಸಂವಾದ ೨೦೨೫ ಅನ್ನು ಉದ್ದೇಶಿಸಿ ಮಾತನಾಡಿ ಅವರು, ಬದಲಾಗುತ್ತಿರುವ ಜಾಗತಿಕ ಪರಿಸರದಲ್ಲಿ ಭಾರತೀಯ ಸ್ಥಾನಮಾನವು ಪರಿವರ್ತನೆಗೆ ಒಳಗಾಗುತ್ತಿದೆ. ನಮ್ಮಲ್ಲಿರುವ ಅತ್ಯಾಧುನಿಕ ತಾಂತ್ರಿಕ ಪ್ರಗತಿ, ವಿಸ್ತಾರಗೊಳ್ಳುತ್ತಿರುವ ಆರ್ಥಿಕತೆ ಮತ್ತು ತತ್ವ ಬದ್ಧ ರಾಜತಾಂತ್ರಿಕತೆಗೆ ಬದ್ಧತೆಯು ಸಮತೋಲನ, ಸ್ಥಿರತೆ ಮತ್ತು ಜವಾಬ್ದಾರಿಯ ಧ್ವನಿಯಾಗಿ ಹೊರಹೊಮ್ಮಲು ಅನುವು ಮಾಡಿಕೊಟ್ಟಿದೆ ಎಂದು ತಿಳಿಸಿದ್ದಾರೆ. ಸುರಕ್ಷಿತ ಭಾರತವಾಗದೇ, ವಿಕಸಿತ ಭಾರತವಾಗಲು ಸಾಧ್ಯವಿಲ್ಲ. ಸಶಕ್ತ ಭಾರತವಾಗದೇ, ಸುರಕ್ಷಿತ ಭಾರತವಾಗಲು ಸಾಧ್ಯವಿಲ್ಲ ಎಂದರು. ರಾಷ್ಟ್ರಪತಿ ದ್ರೌಪದಿ ಮುರ್ಮು ನಡೆದ ಇದೇ ಕಾರ್ಯಕ್ರಮದ ಉದ್ಘಾಟನಾ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ್ದರು. ಈ ಕಾರ್ಯಕ್ರಮ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ತಜ್ಞರನ್ನು ರಕ್ಷಣಾ ಸುಧಾರಣೆ, ತಾಂತ್ರಿಕ ಪರಿವರ್ತನೆ, ನಾಗರಿಕ-ಮಿಲಿಟರಿ ಸಮನ್ವಯ ಮತ್ತು ಭಾರತದ ಉದಯೋನ್ಮುಖ ಭದ್ರತಾ ಅಗತ್ಯತೆಗಳ ಕುರಿತು ಚರ್ಚೆ ನಡೆಸಲು ವೇದಿಕೆಯಾಗಿದೆ.

****

ಛತ್ತೀಸ್‌ಗಢದ ನವ ರಾಯ್‌ಪುರದಲ್ಲಿಂದು ೬೦ನೇ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರ ಮತ್ತು ಪೊಲೀಸ್ ಮಹಾನಿರೀಕ್ಷಕರ ಸಮ್ಮೇಳನ ಆರಂಭವಾಗಲಿದೆ. ನಾಳೆ ಹಾಗೂ ನಾಡಿದ್ದು, ನಡೆಯಲಿರುವ ಮೂರು ದಿನಗಳ ಸಮ್ಮೇಳನದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಗೃಹ ವ್ಯವಹಾರಗಳ ರಾಜ್ಯ ಸಚಿವರು, ವಿವಿಧ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಪೊಲೀಸ್ ಮಹಾ ನಿರ್ದೇಶಕರು ಮತ್ತು ಕೇಂದ್ರೀಯ ಪೊಲೀಸ್ ಸಂಸ್ಥೆಗಳ ಮುಖ್ಯಸ್ಥರು ಭಾಗವಹಿಸಲಿದ್ದಾರೆ. 'ವಿಕಸಿತ ಭಾರತ; ಭದ್ರತಾ ಆಯಾಮಗಳು' ಎಂಬುದು ಸಮ್ಮೇಳನದ ಈ ವರ್ಷದ ಧ್ಯೇಯವಾಕ್ಯವಾಗಿದೆ.

****

ಆತ್ಮನಿರ್ಭರ ಭಾರತವು ಈಗ ಒಂದು ಸಾಮೂಹಿಕ ರಾಷ್ಟ್ರೀಯ ಧ್ಯೇಯವಾಗಿದ್ದು, ಪ್ರತಿಯೊಬ್ಬ ದೇಶವಾಸಿಯೂ ಈ ದೃಷ್ಟಿಕೋನ ಮತ್ತು ಪಯಣಕ್ಕೆ ತಮ್ಮದೇ ಆದ ರೀತಿಯಲ್ಲಿ ಕೊಡುಗೆ ನೀಡಿದ್ದಾರೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಕೈಗಾರಿಕಾ ಮಂಡಳಿ ಎಫ್‌ಐಸಿಸಿಐ ನ ೯೮ನೇ ವಾರ್ಷಿಕ ಸಾಮಾನ್ಯ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಸ್ವಾವಲಂಬನೆಯ ದೃಷ್ಟಿಕೋನವನ್ನು ಭಾರತದ ಆರ್ಥಿಕ ಪ್ರಗತಿಯ ಕೇಂದ್ರಬಿಂದವಾಗಿಸಿದರು. ಈ ವಾರ್ಷಿಕ ಮಹಾಸಭೆಗಾಗಿ ಎಫ್‌ಐಸಿಸಿಐ ಇಂದು ಆಯ್ಕೆ ಮಾಡಿರುವ ವಿಷಯವು ಮಹಾತ್ಮ ಗಾಂಧಿಯವರ ಸ್ವಾವಲಂಬಿ ಆರ್ಥಿಕ ಶಕ್ತಿ ಕೇಂದ್ರದ ದೃಷ್ಟಿಕೋನಕ್ಕೆ ಹೊಂದಿಕೆ ಆಗುತ್ತದೆ ಎಂದು ಸಚಿವರು ಹೇಳಿದರು. ವಿದೇಶಿ ವ್ಯಾಪಾರ ಹೂಡಿಕೆ, ವ್ಯಾಪಾರ ವ್ಯಾಪ್ತಿ ಮತ್ತು ಹೂಡಿಕೆಯನ್ನು ಹೆಚ್ಚಿಸಲು ಸಹಾಯ ಮಾಡಿದೆ. ದೇಶದ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತಾ ವಲಯವು ವೇಗವಾಗಿ ಬೆಳೆಯುತ್ತಿದೆ. ಯುವಕರಲ್ಲಿ ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಕೌಶಲ್ಯದ ಮೇಲೆ ಕೇಂದ್ರೀಕರಿಸುವುದು ಭಾರತದ ಆರ್ಥಿಕತೆಗೆ ಒಂದು ಪ್ರಮುಖ ಬದಲಾವಣೆಯಾಗಬಹುದು ಎಂದು ಸಚಿವರು ತಿಳಿಸಿದರು.

****

ಕೇಂದ್ರ ರೈಲ್ವೆ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಇಂದು ದೆಹಲಿಯಿಂದ ಚಂಡೀಗಢಕ್ಕೆ ತೆರಳುತ್ತಿದ್ದ ರೈಲ್ವೆ ಸಿಬ್ಬಂದಿಯೊಂದಿಗೆ ಜಾಗತಿಕವಾಗಿ ಅನುಸರಿಸಲಾಗುತ್ತಿರುವ ಅತ್ಯುತ್ತಮ ಸಿಗ್ನಲ್ ಮತ್ತು ಹಳಿ ನಿರ್ವಹಣಾ ಕಾರ್ಯವಿಧಾನಗಳ ಕುರಿತು ತಮ್ಮ ಅನುಭವಗಳನ್ನು ಹಂಚಿಕೊಂಡರು. ರೈಲ್ವೆ ಖಾತೆ ರಾಜ್ಯ ಸಚಿವ ರವನೀತ್ ಸಿಂಗ್ ಅವರೊಂದಿಗೆ, ಅವರು ಸಿಬ್ಬಂದಿಗೆ

ಉತ್ತಮ ಸುರಕ್ಷತಾ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವಂತೆ ಪ್ರೋತ್ಸಾಹಿಸಿದರು. ಸಚಿವರು ಸೂಚನಾ ಇಲಾಖೆಯ ನಿರ್ವಹಣಾ ಸಿಬ್ಬಂದಿ ಮತ್ತು ಇತರರೊಂದಿಗೆ ಸಂವಾದ ನಡೆಸಿದರು. ಇದೇ ವೇಳೆ ಅವರು, ಸಿಬ್ಬಂದಿಯ ಕ್ಷೇತ್ರ ಅನುಭವಗಳು ಮತ್ತು ಸವಾಲುಗಳನ್ನು ಆಲಿಸಿದರು ಮತ್ತು ಸಿಗ್ನಲ್‌ಗಳು, ರಿಲೇಗಳು, ಪಾಯಿಂಟ್‌ಗಳು, ಟರ್ನ್‌ಔಟ್‌ಗಳು, ಕ್ರಾಸಿಂಗ್‌ಗಳು ಇತ್ಯಾದಿಗಳ ನಿರ್ವಹಣೆಯ ಬಗ್ಗೆ ವಿಚಾರಿಸಿದರು. ಪಂಜಾಬ್‌ಗೆ ಒಂದು ದಿನದ ಭೇಟಿ ನೀಡಿರುವ ಅವರು ಮೊಹಾಲಿಯಲ್ಲಿರುವ ಸೆಮಿ-ಕಂಡಕ್ಟರ್ ಪ್ರಯೋಗಾಲಯಕ್ಕೆ ಭೇಟಿ ನೀಡಿದರು.

****

ಇಂದು ಮಹಾತ್ಮ ಜ್ಯೋತಿಬಾ ಫುಲೆ ಅವರ ಪುಣ್ಯತಿಥಿ. ಈ ಹಿನ್ನೆಲೆಯಲ್ಲಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಜ್ಯೋತಿಬಾ ಫುಲೆಯವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಬದಲಾವಣೆಗೆ ಶಿಕ್ಷಣ ಅತಿ ಪ್ರಮುಖ ಎಂದು ಪರಿಗಣಿಸಿದ್ದ ಜ್ಯೋತಿಬಾ ಫುಲೆ ಅವರು ಮಹಾನ್ ಸಮಾಜ ಸುಧಾರಕರಾಗಿದ್ದರು ಎಂದು ಸ್ಮರಿಸಿದ್ದಾರೆ. ಆಧುನಿಕ ಶಿಕ್ಷಣವನ್ನು ಅನುಸರಿಸಲು ಮಹಿಳೆಯರಿಗೆ ಸ್ಫೂರ್ತಿ ನೀಡುವುದಲ್ಲದೆ, ಸಮಾಜವನ್ನು ಸಾಮಾಜಿಕ ದುಷ್ಕೃತ್ಯಗಳಿಂದ ಮುಕ್ತಗೊಳಿಸಲು ನಿರಂತರ ಪ್ರಯತ್ನಗಳನ್ನು ಮಾಡಿದರು. ಜ್ಯೋತಿಬಾ ಫುಲೆ ಸ್ಥಾಪಿಸಿದ ಸತ್ಯಶೋಧಕ ಸಮಾಜವು, ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಧ್ವನಿಯಾಯಿತು ಮತ್ತು ಸಮಗ್ರ ರಾಷ್ಟ್ರ ನಿರ್ಮಾಣಕ್ಕೆ ದಾರಿ ಮಾಡಿಕೊಟ್ಟಿತು ಎಂದು ಸಚಿವ ಅಮಿತ್ ಶಾ ಹೇಳಿದ್ದಾರೆ.

****

೫೬ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ - ಇಫೀ ೨೦೨೫ ಗೋವಾದಲ್ಲಿ ಇಂದು ಅದ್ಧೂರಿ ಸಮಾರೋಪ ಸಮಾರಂಭದೊಂದಿಗೆ ಮುಕ್ತಾಯಗೊಳ್ಳಲಿದ್ದು, ಖ್ಯಾತ ನಟ ಧರ್ಮೇಂದ್ರ ಅವರಿಗೆ ಗೌರವ ಸಲ್ಲಿಸಲಾಗುತ್ತಿದೆ. ಈ ತಿಂಗಳ ೨೦ ರಂದು ಪ್ರಾರಂಭವಾದ ಈ ಉತ್ಸವದಲ್ಲಿ ೮೧ ದೇಶಗಳ ೨೪೦ ಕ್ಕೂ ಹೆಚ್ಚು ಚಲನಚಿತ್ರಗಳು ಪ್ರದರ್ಶಿಸಲ್ಪಟ್ಟಿದ್ದು, ಜಾಗತಿಕ ಸಿನಿಮಾದ ಉತ್ಕೃಷ್ಟತೆಯನ್ನು ಎತ್ತಿ ತೋರಿಸಲಾಗಿದೆ. ಇಫೀ ೨೦೨೫ ರ ಸಮಾರೋಪ ಸಮಾರಂಭದಲ್ಲಿಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ಮತ್ತು ಚಿತ್ರೋತ್ಸವದ ಅಧ್ಯಕ್ಷ ಶೇಖರ್ ಕಪೂರ್ ಸೇರಿದಂತೆ ಇತರ ಪ್ರಮುಖ ಗಣ್ಯರು ಭಾಗವಹಿಸಲಿದ್ದಾರೆ. ಚಿತ್ರರಂಗದಲ್ಲಿ ೫೦ ವರ್ಷಗಳ ಸುದೀರ್ಘ ಪಯಣವನ್ನು ಪೂರೈಸಿರುವ ಖ್ಯಾತ ನಟ ರಜನಿಕಾಂತ್ ಅವರಿಗೆ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು.

ಸಿನಿಮಾದಲ್ಲಿನ ಶ್ರೇಷ್ಠತೆಯನ್ನು ಗುರುತಿಸಿ, ಇಂದು ರಾತ್ರಿ ಗೋಲ್ಡನ್ ಪೀಕಾಕ್ ಪ್ರಶಸ್ತಿ, ದಿ

ಸಿಲ್ವರ್ ಪೀಕಾಕ್ ಪ್ರಶಸ್ತಿ ಮತ್ತು ಐಸಿಎಫ್‌ಟಿ ಯುನೆಸ್ಕೋ ಚಲನಚಿತ್ರ ಪ್ರಶಸ್ತಿಯನ್ನು ಆಯ್ದ ಕಲಾವಿದರಿಗೆ ನೀಡಲಾಗುವುದು.

****

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇದೇ ಭಾನುವಾರ ಬೆಳಿಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೮ ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮವು ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ ಜಾಲತಾಣ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು. ಜನತೆ, ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು, ಇಂದು ರಾತ್ರಿಯ ಒಳಗೆ, ಉಚಿತ ಸಹಾಯವಾಣಿ ಸಂಖ್ಯೆ, ೧೮೦೦ ೧೧ ೭೮೦೦, ನಮೋ ಆಪ್, ಅಥವಾ 'ಮೈ ಜಿಒವಿ' ಓಪನ್ ಫೋರಂ ಮೂಲಕ, ಹಂಚಿಕೊಳ್ಳಬಹುದು.

****

ದೇಶೀಯ ಕ್ರಿಕೆಟ್ ಋತುವಿನ ಪ್ರಮುಖ ಪಂದ್ಯಾವಳಿಗಳಲ್ಲಿ ಒಂದಾದ ಸೈಯದ್ ಮುಷ್ತಾಕ್ ಅಲಿ ರಾಷ್ಟ್ರೀಯ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ಇಂದು ಕರ್ನಾಟಕ ತನ್ನ ಎರಡನೇ ಪಂದ್ಯದಲ್ಲಿ ಜಾರ್ಖಂಡ್ ತಂಡವನ್ನು ಎದುರಿಸಲಿದೆ. ಗುಜರಾತ್‌ನ ಅಹಮದಾಬಾದ್‌ನಲ್ಲಿರುವ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಈ ಪಂದ್ಯ ಸಂಜೆ ೪.೩೦ ಆರಂಭವಾಗಲಿದೆ. ಡಿ ಗುಂಪಿನಲ್ಲಿರುವ ಕರ್ನಾಟಕ ಮೊದಲ ಪಂದ್ಯದಲ್ಲಿ ಉತ್ತರಾಖಂಡ ವಿರುದ್ಧ ಗೆಲುವು ಸಾಧಿಸಿತ್ತು.

*****END*****